**<u>ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ ಇವರು ನಿಯಮ 72ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆ:</u>**

**ಹಾವೇರಿ ಜಿಲ್ಲೆಯ ಚೌಡಯ್ಯದಾನಪುರದ ತುಂಗಭದ್ರಾ ನದಿಯ ದಡದಲ್ಲಿರುವ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಐಕ್ಯ ಮಂಟಪವು ಆಗಾಗ್ಗೆ ನದಿಗೆ ಬರುವ ಪ್ರವಾಹದಿಂದ ನದಿಯ ನೀರಿನಲ್ಲಿ ಮುಳುಗುತ್ತಿದೆ. ಇದರಿಂದ ಐಕ್ಯಮಂಟಪವು ಶಿಥಿಲಾವಸ್ಥೆಯಲ್ಲಿರುವುದರಿಂದ ದರ್ಶನಕ್ಕೆ ಬರುವ ಭಕ್ತರಿಗೆ ಅನಾನುಕೂಲವಾಗುತ್ತಿದೆ. ಇವರ ಸಮಕಾಲೀನನವರಾದ ಶ್ರೀ ಬಸವಣ್ಣನವರ ಐಕ್ಯ ಮಂಟಪವನ್ನು ಕೂಡಲ ಸಂಗಮದಲ್ಲಿ ನಿರ್ಮಿಸಿದ ರೀತಿಯಲ್ಲಿ ಇಲ್ಲಿಯೂ ಐಕ್ಯಮಂಟಪವನ್ನು ಅಭಿವೃದ್ಧಿಪಡಿಸಬೇಕು. ಇದಕ್ಕೆ ಹೊಂದಿಕೊಂಡಿರುವ ಸುಕ್ಷೇತ್ರ ನರಸೀಪುರದಲ್ಲಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಗುರುಪೀಠವು ಇದು ಸುಮಾರು 10 ಎಕರೆ ವಿಸ್ತೀರ್ಣದಲ್ಲಿ ಆವರಿಸಿಕೊಂಡಿದ್ದು, ಇದಕ್ಕೆ ಕಾಂಪೌಂಡ್ ಸಹ ಇರುವುದಿಲ್ಲ. ಇಲ್ಲಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ವಿಚಾರ ಮತ್ತು ತತ್ವ ಸಿದ್ಧಾಂತವನ್ನು ಹಾಗೂ ವಚನ ಸಾಹಿತ್ಯವನ್ನು ಪ್ರಚಾರ ಮಾಡುವಂತಹ ಕೆಲಸ ಜಗದ್ಗುರು ಪೂಜ್ಯ ಶ್ರೀ ಶಾಂತಭೀಷ್ಮ ಚೌಡಯ್ಯ ಮಹಾ ಸ್ವಾಮಿಗಳು ಮಾಡುತಿದ್ದಾರೆ. ಆದ್ದರಿಂದ ಚೌಡದಾಸನಪುರದಲ್ಲಿನ ನಿಜಶರಣ ಅಂಬಿಗರ ಚೌಡಯ್ಯನವರ ಮೂಲ ಗದ್ದಿಗೆ ಅಭಿವೃದ್ಧಿ ಆಗಬೇಕು ಇದು ಸಮುದಾಯದ ಅಧೀನಕ್ಕೆ ಬರಬೇಕು, ಇಲ್ಲಿ ಮುಕ್ತವಾಗಿ ಸಮಾಜದ ಶರಣರು ಪೂಜಿಸುವಂತಾಗಬೇಕು. ಈ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಅನುದಾನ ಒದಗಿಸುವ ಕುರಿತು ನಿಯಮ 72ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಸಾರಿಗೆ ಮತ್ತು ಮುಜರಾಯಿ ಸಚಿವರ ಹೇಳಿಕೆ.**

**ಉತ್ತರ:**

ಹಾವೇರಿ ಜಿಲ್ಲೆಯ ಚೌಡಯ್ಯದಾನಪುರದ ತುಂಗಭದ್ರಾ ನದಿಯ ದಡದಲ್ಲಿರುವ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಐಕ್ಯ ಮಂಟಪವು ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆಯ ವ್ಯಾಪ್ತಿಗೆ ಒಳಪಡುವುದಿಲ್ಲ.

ಹಾವೇರಿ ಜಿಲ್ಲೆಯ ಚೌಡಯ್ಯದಾನಪುರದ ತುಂಗಭದ್ರಾ ನದಿಯ ದಡದಲ್ಲಿರುವ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಐಕ್ಯ ಮಂಟಪ ಹಾಗೂ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಅನುದಾನ ಮಂಜೂರು ಮಾಡುವ ಕುರಿತು ಯಾವುದೇ ಪ್ರಸ್ತಾವನೆಯು ಜಿಲ್ಲಾಧಿಕಾರಿಗಳಿಂದ/ಆಯುಕ್ತರಿಂದ ಸ್ವೀಕೃತವಾಗಿರುವುದಿಲ್ಲ. ಪ್ರಸ್ತಾವನೆ ಸ್ವೀಕೃತವಾದಲ್ಲಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಐಕ್ಯ ಮಂಟಪ ಹಾಗೂ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಅನುದಾನವನ್ನು ಬಿಡುಗಡೆ ಮಾಡಲು ಮಾನ್ಯ ಮುಖ್ಯಮಂತ್ರಿಗಳ ಹಾಗೂ ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಗಮನಕ್ಕೆ ತರಲಾಗುವುದು.

ಕಂಇ 105 ಮುಸಪ್ರ 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು